**All India Radio: Bangalore**
**Regional Bulletin In Kannada**
**13.02.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.02.2025 / 6.40 p.m.**
********************

ಮುಖ್ಯಾಂಶಗಳು

೧. ನಾಳೆ ಬೆಂಗಳೂರಿಗೆ ಆಗಮಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು; ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ಭಾಗಿ

೨. ಬೆಂಗಳೂರಿನಲ್ಲಿ ಮೆಟ್ರೋ ಪ್ರಯಾಣ ದರ ಪರಿಷ್ಕರಿಸಲು ಬಿಎಂಆರ್‌ಸಿಎಲ್ ನಿರ್ಧಾರ

೩. ಕೃತಕ ಬುದ್ಧಿಮತ್ತೆಯ ಪ್ರಗತಿಯನ್ನು ಊಹಿಸಲು ಸಾಧ್ಯವಿಲ್ಲ; ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಗೂಗಲ್ ಎಕ್ಸ್ ಸಂಸ್ಥಾಪಕ ಅಭಿಮತ

೪. ಐದು ವರ್ಷಗಳ ಕಾಲ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ - ಗೃಹ ಸಚಿವ ಡಾ.ಜಿ.ಪರಮೇಶ್ವರ್

****************

ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನಾಳೆಯಿಂದ ಎರಡು ದಿನಗಳ ಕಾಲ ನಡೆಯಲಿರುವ ೧೧ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ರಾಷ್ಟಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ.

ರಾಷ್ಟಪತಿ ಅವರ ಜೊತೆಗೆ ೧೧೫ ದೇಶಗಳ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ೬ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ .

ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

ಈ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವೆ ಅನ್ನಪೂರ್ಣ ದೇವಿ, ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಮಾಜಿ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ, ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್ ಮತ್ತು ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಅವರು ಭಾಗವಹಿಸಲಿದ್ದಾರೆ.

ಈ ಸಮ್ಮೇಳನದಿಂದ ಬರುವ ಆದಾಯವನ್ನು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಬಳಸಲು ನಿರ್ಧರಿಸಲಾಗಿದೆ.

****************

ಮೆಟ್ರೋ ಪ್ರಯಾಣ ದರ ಇಳಿಕೆ ಸಂಬಂಧ ಬದಲಾವಣೆ ಮಾಡಲು ನಿರ್ಧರಿಸಿದ್ದು, ಶೀಘ್ರವೇ ಪರಿಷ್ಕೃತ ದರ ಪ್ರಕಟಿಸಲಾಗುವುದು ಎಂದು ಬಿಎಂಆರ್‌ಸಿಎಲ್ ನಿರ್ದೇಶಕ ಮಹೇಶ್ವರರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಮಾರ್ಗದಲ್ಲಿ ಶೇಕಡ ೯೦ ಹಾಗೂ ಶೇಕಡ ೧೦೦ರಷ್ಟು ಏರಿಕೆಯಾಗಿದೆಯೋ ಅಲ್ಲಿ ದರ ಪರಿಷ್ಕರಿಸಲಾಗುವುದು ಎಂದು ತಿಳಿಸಿದ್ದಾರೆ.

ಬೇರೆ ರಾಜ್ಯಗಳಿಗೆ ಹೋಲಿಸಿದರೆ, ಬೆಂಗಳೂರಿನಲ್ಲಿ ವಿಪರೀತ ದರ ಏರಿಕೆಯಾಗಿದ್ದು, ಇದರ ವಿರುದ್ಧ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಎಚ್ಚೆತ್ತ ಬಿಎಂಆರ್‌ಸಿಎಲ್ ದರ ಇಳಿಸಲು ಮುಂದಾಗಿದೆ.

****************

ಬೆಂಗಳೂರಿನಲ್ಲಿ ನಡೆಯುತ್ತಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಹಲವು ಕಂಪನಿಗಳು ರಾಜ್ಯದಲ್ಲಿ ಹೂಡಿಕೆಗೆ ಮುಂದಾಗಿವೆ.

ಈ ನಡುವೆ, ಇಂದು ನಡೆದ ಗೋಷ್ಠಿಯಲ್ಲಿ ಮಾತನಾಡಿದ ಗೂಗಲ್ ಎಕ್ಸ್ ಸಂಸ್ಥೆಯ ಸ್ಥಾಪಕ ಸೆಬಾಸ್ಟಿಯನ್ ಥ್ರನ್ ಮುಂದಿನ ದಿನಗಳಲ್ಲಿ ಸಾವಿನ ನಂತರವೂ ಮಕ್ಕಳು ಮೊಮ್ಮಕ್ಕಳ ಜೊತೆ ಮಾತನಾಡಬಹುದು ಎಂದು ಭವಿಷ್ಯ ನುಡಿದಿದ್ದಾರೆ. ಕೃತಕ ಬುದ್ಧಿಮತ್ತೆಯ ಪ್ರಗತಿಯನ್ನು ಊಹಿಸಲು ಸಾಧ್ಯವಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಸರಕು ಸಾಗಣೆ ಕ್ಷೇತ್ರಕ್ಕೆ ಒತ್ತು ಕೊಟ್ಟರೆ, ಭಾರತ ಮೂರನೇ ಅತಿ ದೊಡ್ಡ ಆರ್ಥಿಕತೆಯ ರಾಷ್ಟ್ರವಾಗಲಿದೆ ಎಂದು ವೋಲ್ವೊ ಗ್ರೂಪ್ ಅಧ್ಯಕ್ಷ ಮಾರ್ಟಿನ್ ತಿಳಿಸಿದ್ದಾರೆ.

ಪರಂಪರೆಯಿಂದ ಮಾರುಕಟ್ಟೆ ಸಂಸ್ಕೃತಿಗೆ ಗೋಷ್ಠಿಯಲ್ಲಿ ಮಾತನಾಡಿದ ವಸ್ತ್ರವಿನ್ಯಾಸಕಿ ಅನಾವಿಲಾ ಮಿಶ್ರ, ವಿಶ್ವದಲ್ಲೇ ಭಾರತೀಯ ಜವಳಿ ವಿನ್ಯಾಸಕ್ಕೆ ಹೆಚ್ಚಿನ ಬೇಡಿಕೆ ಇದೆ ಎಂದು ಹೇಳಿದ್ದಾರೆ.

ಜಗತ್ತಿನಲ್ಲಿ ಶೇಕಡ ೩೦ ರಷ್ಟು ಜನರಿಗೆ ಮಾತ್ರ ಆರೋಗ್ಯ ಸೇವೆಗಳು ಲಭ್ಯವಿದ್ದು, ಉಳಿದ ಶೇಕಡ ೭೦ ರಷ್ಟು ಜನರಿಗೆ ದುಬಾರಿಯಾಗಿವೆ ಎಂದು ಹಿರಿಯ ಹೃದ್ರೋಗ ತಜ್ಞ ಡಾ.ದೇವಿಶೆಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಕ್ವಿನ್‌ಸಿಟಿ ಅಭಿವೃದ್ಧಿಗೆ ಕರ್ನಾಟಕದ ನೀಲ ನಕ್ಷೆ ಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಮಾ ಕ್ಷೇತ್ರ ಜನಪರವಾಗಬೇಕು ಎಂದು ಪ್ರತಿಪಾದಿಸಿದ್ದಾರೆ.

****************

ಇನ್ವೆಸ್ಟ್ ಕರ್ನಾಟಕ ೨೦೨೫ ಪ್ರಶಸ್ತಿಗಳನ್ನು ಘೋಷಿಸಲಾಗಿದೆ. ರಾಜ್ಯದಲ್ಲಿ ಉದ್ಯೋಗಕ್ಕೆ ಗಮನಾರ್ಹ ಕೊಡುಗೆ ಗಮನಿಸಿ ಉದ್ಯೋಗ ಸೃಷ್ಟಿಯ ಚಾಂಪಿಯನ್ ಪ್ರಶಸ್ತಿಯನ್ನು ಟಾಟಾ ಎಲೆಕ್ಟ್ರಾನಿಕ್ಸ್‌ಗೆ ನೀಡಲಾಗಿದೆ.

ಉದ್ಯೋಗ ಸೃಷ್ಟಿಯ ಚಾಂಪಿಯನ್ ಪ್ರಶಸ್ತಿಯನ್ನು ಐಟಿ ಕ್ಷೇತ್ರದಲ್ಲಿ ಇನ್ಫೋಸಿಸ್‌ಗೆ ನೀಡಲಾಗಿದೆ. ನವೀಕರಿಸಬಹುದಾದ ಇಂಧನ ಕ್ಷೇತ್ರಕ್ಕೆ ನೀಡಿರುವ ಕೊಡುಗೆ ಗಮನಿಸಿ ಖeಓeತಿ ಪವರ್‌ಗೆ ಪ್ರಶಸ್ತಿ ಘೋಷಿಸಲಾಗಿದೆ.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಬದಲಾವಣೆ ಸಂಬಂಧ ಪ್ರತಿಕ್ರಿಯಿಸಿದ ಅವರು, ೫ ವರ್ಷಗಳ ಅವಧಿಗೆ ಮುಖ್ಯಮಂತ್ರಿಯನ್ನು ಆಯ್ಕೆ ಮಾಡಲಾಗಿದೆ. ಎರಡೂವರೆ ವರ್ಷಕ್ಕೆ ಮಾತ್ರ ಆಯ್ಕೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ, ಮೈಸೂರಿನಲ್ಲಿ ನಡೆದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಈಗಾಗಲೇ ೧೦ಕ್ಕೂ ಹೆಚ್ಚು ಆರೋಪಿಗಳನ್ನು ಬಂಧಿಸಲಾಗಿದ್ದು, ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

****************

ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ಇದೇ ೨೨ ರಿಂದ ೨೪ ವರೆಗೆ ಹಮ್ಮಿಕೊಂಡ ರನ್ನವೈಭವದ ಹಿನ್ನಲೆಯಲ್ಲಿ ಹಮ್ಮಿಕೊಂಡ ರನ್ನರಥಯಾತ್ರೆಗೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಗುರುವಾರ ಚಾಲನೆ ನೀಡಿದರು.

ರಥಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು ಈ ರನ್ನ ರಥಯಾತ್ರೆ ರನ್ನ ಬೆಳಗಲಿಯಿಂದ ಪ್ರಾರಂಭವಾಗಿ ಮುಧೋಳ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಯ ೭೨ ಗ್ರಾಮಗಳಿಗೆ ಸಂಚರಿಸಿ ಮರಳಿ ರನ್ನ ಬೆಳಗಲಿಗೆ ಮುಕ್ತಾಯಗೊಳ್ಳಲಿದೆ. ಸಾರ್ವಜನಿಕರು ಪಾಲ್ಗೊಳ್ಳುವ ಮೂಲಕ ರಥಯಾತ್ರೆ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕರೆ ನೀಡಿದ್ದಾರೆ.

****************

ಆಕಾಶವಾಣಿ ಭದ್ರಾವತಿ ಕೇಂದ್ರದಲ್ಲಿ ವಿಶ್ವ ರೇಡಿಯೋ ದಿನವನ್ನು ವಿಶೇಷವಾಗಿ ಆಚರಿಸಲಾಯಿತು.

ವಿಶ್ವ ರೇಡಿಯೋ ದಿನದಂದು ವಿಶ್ವ ಗುರು ಬಸವಣ್ಣನವರ ವಚನಗಳನ್ನು ಆದರಿಸಿದ ವಿಶೇಷ ಕಾರ್ಯಕ್ರಮ ಸರಣಿ ವಚನೋದಯಕ್ಕೆ ಆಕಾಶವಾಣಿ ಆವರಣದಲ್ಲಿ ಬಸವಣ್ಣನವರ ಮೂರ್ತಿಗೆ ದೀಪ ಬೆಳಗಿಸುವುದರ ಮೂಲಕ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಬೆಂಗಳೂರಿನ ಬಸವಸಮಿತಿ ಅಧ್ಯಕ್ಷರಾದ ಡಾ.ಅರವಿಂದ ಜತ್ತಿ ಕಾರ್ಯಕ್ರಮ ಸರಣಿಯ ಆಶಯ ವಿವರಿಸಿದರು.

****************

ಜನವರಿ-೨೦೨೫ರ ಮಾಹೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ ೪೧ ಸಾವಿರದ ೪೪೬ ವಾಹನಗಳನ್ನು ತನಿಖೆಗೊಳಪಡಿಸಿದೆ.

ಮೂರು ಸಾವಿರದ ೬೨೧ ಪ್ರಕರಣಗಳನ್ನು ಪತ್ತೆಹಚ್ಚಿ, ೩ ಸಾವಿರದ ೮೩೬ ಟಿಕೇಟ್ ರಹಿತ ಪ್ರಯಾಣಿಕರಿಂದ ೬ ಲಕ್ಷದ ೮೬ ಸಾವಿರ ರೂಪಾಯಿಗಳನ್ನು ದಂಡದರೂಪದಲ್ಲಿ ವಸೂಲಿ ಮಾಡಿದ್ದಾರೆ.

ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ ೯೪ ಸಾವಿರದ ೨೮೪ ರೂಪಾಯಿಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ.

****************

ವಿಶ್ವ ದಿವ್ಯಾಂಗರ ದಿನಾಚರಣೆ ನಿಮಿತ್ತ ಬೆಳಗಾವಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲಿಕರಣ ಮತ್ತು ಕ್ರೀಡಾ ಇಲಾಖೆ, ಆಶ್ರಯದಲ್ಲಿ ಕ್ರೀಡಾಕೂಟಕ್ಕೆ ಖಾನಾಪುರ ತಾಲೂಕಾ ಪಂಚಾಯಿತಿ ಕಾರ್ಯನಿರ್ವಹಕ ಅಧಿಕಾರಿ ದಿನೇಶ ಕುಮಾರ ಮೀನಾ ಚಾಲನೆ ನೀಡಿದರು. ಬೆಳಗಾವಿ ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿದ ದಿವ್ಯಾಂಗರು ವಿವಿಧ ಸ್ಪರ್ಧೇಗಳಲ್ಲಿ ಭಾಗವಹಿಸಿದ್ದಾರೆ.

ಯುವ ಸಬಲಿಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕ ಬಿ.ಶ್ರೀನಿವಾಸ ಆಕಾಶವಾಣಿ ಜೊತೆ ಮಾತನಾಡಿ, ಜಿಲ್ಲಾ ಮಟ್ಟದ ವೇದಿಕೆಗಳು ಕ್ರೀಡಾಪಟುಗಳಿಗೆ ಪ್ರೋತ್ಸಾಹದಾಯಕವಾಗಿವೆ ಎಂದು ತಿಳಿಸಿದ್ದಾರೆ.

ಧ್ವನಿ: ಬಿ. ಶ್ರೀನಿವಾಸ

****************

ಅಕ್ರಮವಾಗಿ ಕೆ.ಸಿ.ವ್ಯಾಲಿ ನೀರನ್ನು ನೇರವಾಗಿ ಕಾಲುವೆಯಿಂದ ನೀರನ್ನು ಪಂಪ್ ಮಾಡುತ್ತಿದ್ದ ಪಂಪ್ ಸೆಟ್‌ಗಳನ್ನು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.

ಕೋಲಾರ ತಾಲೂಕಿನ ಸುಗಟೂರು ಹೋಬಳಿ ಗೌಡಹಳ್ಳಿ ಬಳಿ ಎರಡು ಪಂಪು, ಎರಡು ಪ್ಯಾನಲ್ ಬೋರ್ಡ್ ಹಾಗೂ ೧೨ ಪೈಪುಗಳನ್ನು ವಶಕ್ಕೆ ಪಡೆದು ಟಾಸ್ಕ್ ಪೋರ್ಸ್ ತಂಡದ ಅಧಿಕಾರಿಗಳು ರೈತರಿಗೆ ಎಚ್ಚರಿಕೆ ನೀಡಿದ್ದಾರೆ.

ಅಕ್ರಮವಾಗಿ ಕಾಲುವೆಗಳಿಂದ ನೀರನ್ನು ಪಂಪ್ ಮಾಡಿದರೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

****************

ಬೆಳಗಾವಿ ಜಿಲ್ಲೆ ಗೋಕಾಕ ತಾಲೂಕಿನ ಕಲ್ಲೋಳಿ ಪಟ್ಟಣದ ವೀರ ಯೋಧ ಪ್ರವೀಣ್ ಸುಭಾಸ್ ಖಾನಗೌಡ್ರ ನಿನ್ನೆ ಚೆನ್ನೈನ ಭಾರತೀಯ ನೌಕಾ ಪಡೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಹುತಾತ್ಮರಾಗಿದ್ದಾರೆ.

ಸಕಲ ಸರ್ಕಾರಿ ಗೌರವಗಳೊಂದಿಗೆ ನಾಳೆ ಅಂತ್ಯಕ್ರಿಯೆ ನಡೆಯಲಿದೆ. ವೀರ ಯೋಧ ಪ್ರವೀಣ ಖಾನಗೌಡ್ರ ನಿಧನಕ್ಕೆ ಸಂಸದ ಈರಣ್ಣ ಕಡಾಡಿ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

****************

ಸಂಕ್ಷಿಪ್ತ ಸುದ್ದಿಗಳು

೧. ಸರ್ಕಾರಿ ಆಡಳಿತ ವ್ಯವಸ್ಥೆ ಪರಿಶೀಲನೆಗಾಗಿ ಹಾವೇರಿ ಜಿಲ್ಲೆಗೆ ಭೇಟಿ ನೀಡಿರುವ ನಿವೃತ್ತ ನ್ಯಾಯಮೂರ್ತಿಯೂ ಆಗಿರುವ ಉಪ ಲೋಕಾಯುಕ್ತ ಬಿ. ವೀರಪ್ಪ ಅವರು ಇಂದು ಹಾವೇರಿ ತಾಲ್ಲೂಕು ಗೌರಾಪುರ ಬಳಿ ಇರುವ ನಗರಸಭೆ ಕಸ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ನಗರದ ಗುರುಭವನದಲ್ಲಿ ಸಾರ್ವಜನಿಕರಿಂದ ದೂರುಗಳು ಸ್ವೀಕರಿಸಿದ್ದಾರೆ.

೨. ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿಶೇಷ ಯೋಜನೆಯಡಿ ಇಲಾಖೆಗಳಿಗೆ ಬಿಡುಗಡೆ ಆಗಿರುವ ಅನುದಾನವನ್ನು ವ್ಯಯಿಸುವ ಮೂಲಕ ಶೇಕಡ ೧೦೦ರಷ್ಟು ಪ್ರಗತಿ ಸಾಧಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

********ಮುಕ್ತಾಯ********